All India Radio: Bangalore
Regional Bulletin In Kannada
28.04.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರೈಲ್ವೆ ನೇಮಕಾತಿ ಪರೀಕ್ಷೆಯಲ್ಲಿ ಜನಿವಾರ, ಮಾಂಗಲ್ಯ ತೆಗೆಸದಂತೆ ಸಚಿವ ವಿ.ಸೋಮಣ್ಣ ಸೂಚನೆ
- ರಾಜ್ಯದಲ್ಲಿ ಮೇ ೫ ರಿಂದ ೧೭ರವರೆಗೆ ಪರಿಶಿಷ್ಟ ಜಾತಿಯ ಜನರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ
- ನವದೆಹಲಿಯಲ್ಲಿ ಹಿರಿಯ ನಟ ಅನಂತ್‌ನಾಗ್ ಸೇರಿದಂತೆ ರಾಜ್ಯದ ಒಂಭತ್ತು ಮಂದಿಗೆ ರಾಷ್ಟ್ರಪತಿಗಳಿಂದ ಪದ್ಮ ಪ್ರಶಸ್ತಿ ಪ್ರದಾನ
- ಕೇಂದ್ರ ಸರ್ಕಾರದ ಜನವಿರೋಧಿ ನೀತಿ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ
- ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ನಿರ್ಮಾಣಕ್ಕೆ ಗುಜರಾತ್ ಮೂಲದ ಕಂಪನಿಯಿಂದ ವಿನ್ಯಾಸದ ಮಾದರಿ ಸಲ್ಲಿಕೆ

******************

ರೈಲ್ವೆ ನೇಮಕಾತಿ ಮಂಡಳಿ ಆಯೋಜಿಸುವ ನರ್ಸಿಂಗ್ ಅಧೀಕ್ಷಕರ ಹುದ್ದೆಗಳ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಂದ ಜನಿವಾರ ಮತ್ತು ಮಂಗಳಸೂತ್ರಗಳನ್ನು ತೆಗೆಸದಂತೆ ಅಧಿಕಾರಿಗಳಿಗೆ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ನಿರ್ದೇಶನ ನೀಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಗೊಂದಲದ ಹಿನ್ನೆಲೆಯಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಗಳನ್ನು

ನಿವಾರಿಸಲಾಗಿದೆ. ಎಲ್ಲಾ ಪರೀಕ್ಷಾ ನಿಯಮಗಳನ್ನು ಪಾಲಿಸಿ ಅಭ್ಯರ್ಥಿಗಳಿಗೆ ಪರೀಕ್ಷೆ ಬರೆಯಲು ಅನುವು ಮಾಡಿಕೊಡುವಂತೆ ಸೂಚಿಸಿದ್ದಾರೆ.

ರೈಲ್ವೆ ಇಲಾಖೆ ಹೊರಡಿಸಿದ ಸುತ್ತೋಲೆಯಲ್ಲಿ, ಜನಿವಾರ, ಮಂಗಳಸೂತ್ರ ಧರಿಸಿದ ಪರೀಕ್ಷಾರ್ಥಿಗಳನ್ನು ಪರೀಕ್ಷಾ ಕೇಂದ್ರಗಳ ಒಳಗೆ ಪ್ರವೇಶಿಸಲು ಅನುಮತಿ ನೀಡಲಾಗುವುದಿಲ್ಲ ಎಂದು ಹೇಳಲಾಗಿತ್ತು. ವಿವಿಧ ಹಿಂದೂ ಸಂಘಟನೆಗಳು ಈ ಸುತ್ತೋಲೆಯ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದವು. ಈ ಹಿನ್ನೆಲೆಯಲ್ಲಿ ಮಧ್ಯಪ್ರವೇಶಿಸಿದ ಸಚಿವ ವಿ.ಸೋಮಣ್ಣ ಅಧಿಕಾರಿಗಳಿಗೆ ಈ ನಿರ್ದೇಶನ ನೀಡಿದ್ದಾರೆ.

ರೈಲ್ವೆ ನೇಮಕಾತಿ ಮಂಡಳಿಯ ನರ್ಸಿಂಗ್ ಅಧೀಕ್ಷಕರ ಪರೀಕ್ಷೆ ಇದೇ ೨೮, ೨೯ ಹಾಗೂ ೩೦ ರಂದು ನಡೆಯಲಿದೆ.

******************

ನ್ಯಾಯಮೂರ್ತಿ ಡಾ. ಎಚ್.ಎನ್. ನಾಗಮೋಹನ್ ದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗದ ವತಿಯಿಂದ ಪರಿಶಿಷ್ಟ ಜಾತಿಯ ಒಳ ಮೀಸಲಾತಿ ವರ್ಗೀಕರಣ ಕುರಿತು ರಾಜ್ಯಾದ್ಯಂತ ಮೇ ೫ ರಿಂದ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳಲು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಪರಿಶಿಷ್ಟ ಜಾತಿಯ ಪಟ್ಟಿಗೆ ಸೇರಿರುವ ಜನರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ, ಔದ್ಯೋಗಿಕ ಪ್ರಾತಿನಿಧ್ಯತೆ ಹಾಗೂ ಮತ್ತಿತರ ಸ್ಥಿತಿ-ಗತಿಗಳ ಬಗ್ಗೆ ಸಮಗ್ರ ದತ್ತಾಂಶ ಸಂಗ್ರಹಿಸಲು ತುಮಕೂರು ಜಿಲ್ಲೆಯಲ್ಲಿ ಮೇ ೫ ರಿಂದ ೧೭ರವರೆಗೆ ಸಮೀಕ್ಷೆ ಹಮ್ಮಿಕೊಳ್ಳಲಾಗಿದೆ.

ಸಮೀಕ್ಷೆದಾರರು ಮನೆ-ಮನೆಗೆ ಭೇಟಿ ನೀಡಿ ಕುಟುಂಬ ಸದಸ್ಯರಿಂದ ನಿಖರ ಮಾಹಿತಿಯನ್ನು ಸಂಗ್ರಹಿಸುವ ವೇಳೆ ಸಹಕರಿಸುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚನೆ ನೀಡಿದ್ದಾರೆ.

ಸಮೀಕ್ಷಾ ಕಾರ್ಯವು ಯಾವುದೇ ಲೋಪದೋಷಗಳಿಲ್ಲದೆ, ನೈಜ ಮಾಹಿತಿಯನ್ನು ಒಳಗೊಂಡಿರಬೇಕು ಎಂದು ನಿರ್ದೇಶನ ನೀಡಿದ್ದಾರೆ.

ವಿಜಯಪುರ ಜಿಲ್ಲೆಯಾದ್ಯಂತ ಮೇ.೫ರಿಂದ ೧೭ರವರೆಗೆ ೧೨ ದಿನಗಳ ಕಾಲ ಕೈಗೊಂಡಿರುವ ಸಮೀಕ್ಷಾ ಕಾರ್ಯವನ್ನು ಅತ್ಯಂತ ಪಾರದರ್ಶಕ ಹಾಗೂ ನಿಯಮಗಳನ್ವಯ ನಡೆಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ನಿರ್ದೇಶನ ನೀಡಿದ್ದಾರೆ.

ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮೀಕ್ಷಾ ಕಾರ್ಯವನ್ನು ಗಣತಿದಾರರು ವೈಜ್ಞಾನಿಕ ಹಾಗೂ ಸಮರ್ಪಕವಾಗಿ ನಿರ್ವಹಿಸಬೇಕು. ಯಾರೊಬ್ಬರೂ ಕೂಡ ಸಮೀಕ್ಷೆಯಿಂದ ಬಿಟ್ಟುಹೋಗದಂತೆ ನೋಡಿಕೊಳ್ಳಬೇಕು ಎಂದು ಉಡುಪಿ ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ತಿಳಿಸಿದ್ದಾರೆ.

ರಾಮನಗರ ಜಿಲ್ಲೆಯಲ್ಲಿ ಸಮೀಕ್ಷಾ ಕಾರ್ಯವು ಎರಡು ಹಂತಗಳಲ್ಲಿ ನಡೆಯಲಿದ್ದು, ಮನೆ ಮನೆ ಭೇಟಿಯ ಅವಧಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿ ಸಂಗ್ರಹಿಸಲಾಗುವುದು ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*****************

ಕೇಂದ್ರ ಸರ್ಕಾರದ ಬೆಲೆ ಏರಿಕೆ ಹಾಗೂ ಸಂವಿಧಾನ ವಿರೋಧಿ ನೀತಿ ಖಂಡಿಸಿ ಬೆಳಗಾವಿಯಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಪ್ರತಿಭಟನೆ ನಡೆಸಿತು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಯುಪಿಎ ಅಧಿಕಾರದಲ್ಲಿದ್ದಾಗ ಅಗತ್ಯ ವಸ್ತುಗಳ ಬೆಲೆ ಕಡಿಮೆಯಾಗಿತ್ತು. ಇದೀಗ ಕೇಂದ್ರದ ತಪ್ಪು ಆರ್ಥಿಕ ನೀತಿಯಿಂದಾಗಿ ಬೆಲೆ ಏರಿಕೆ ದ್ವಿಗುಣವಾಗಿದೆ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರ, ಸಂವಿಧಾನ ವಿರೋಧಿ ನೀತಿ ಅನುಸರಿಸುತ್ತಾ ಬಂದಿದೆ ಎಂದು ದೂರಿದರು. ಕಾಂಗ್ರೆಸ್ ಎಂದಿಗೂ ಸಂವಿಧಾನ ವಿರೋಧಿ ಕಾರ್ಯ ನಡೆಸಿಲ್ಲ ಎಂದು ಸ್ಪಷ್ಟಪಡಿಸಿದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ ( ೩೦ ಸೆಕೆಂಡ್ಸ್ )

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಸಂವಿಧಾನವನ್ನು ಕಾಪಾಡಬೇಕೆಂದು ಕರೆ ನೀಡಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಹಲವು ಸಚಿವರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

*****************

ಪಾಕಿಸ್ತಾನ ಜೊತೆ ಯುದ್ಧ ಬೇಡ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಯನ್ನು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಸಮರ್ಥಿಸಿಕೊಂಡಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ, ಭಾರತೀಯರು ಶಾಂತಿ ಪ್ರಿಯರು ಎಂದು ತಿಳಿಸಲು ಉದ್ದೇಶಿಸಿದ್ದರು ಎಂದು ಸ್ಪಷ್ಟನೆ ನೀಡಿದ್ದಾರೆ.

ಇದೇ ವೇಳೆ ದೇಶದ ರಕ್ಷಣೆಗಾಗಿ ಯುದ್ಧ ಅನಿವಾರ್ಯವಾದರೆ, ಶತ್ರುಗಳಿಗೆ ಪಾಠ ಕಲಿಸಬೇಕು ಎಂದು ಹೇಳಿದ್ದಾರೆ.

*****************

ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

ರಾಜ್ಯದ ಒಂಭತ್ತು ಮಂದಿ ಪದ್ಮ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ಪಿಟೀಲು ವಾದಕ ಮತ್ತು ಸಂಯೋಜಕ ಡಾ. ಎಲ್. ಸುಬ್ರಮಣಿಯಂ ಪದ್ಮವಿಭೂಷಣ ಪ್ರಶಸ್ತಿಗೆ ಹಾಗೂ ಹಿರಿಯ ಸಂಪಾದಕ ಮತ್ತು ಪ್ರಸಾರ ಭಾರತಿ ಮಾಜಿ ಅಧ್ಯಕ್ಷ ಎ. ಸೂರ್ಯ ಪ್ರಕಾಶ್, ಚಲನಚಿತ್ರ ನಟರಾದ ಅನಂತ್ ನಾಗ್, ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

ಕಲಾ ಕ್ಷೇತ್ರದ ಸಾಧನೆಗಾಗಿ ಬಾಗಲಕೋಟೆಯ ಭೀಮವ್ವ ದೊಡ್ಡ ಬಾಳಪ್ಪ ಶಿಳ್ಳೆಕ್ಯಾತರ, ಹಾಸನ ರಘು, ಉದ್ಯಮ ಕ್ಷೇತ್ರದಿಂದ ಪ್ರಶಾಂತ್ ಪ್ರಕಾಶ್, ಕಲಾ ಕ್ಷೇತ್ರದ ಸಾಧನೆಗಾಗಿ ರಿಕ್ಕಿ ಕೇಜ್,

ಜಾನಪದ ಗಾಯಕ ವೆಂಕಪ್ಪ ಅಂಭಾಜಿ ಸುಗತೇಕರ, ಹಿರಿಯ ಕ್ಯಾನ್ಸರ್ ಚಿಕಿತ್ಸಾ ತಜ್ಞೆ ವಿಜಯಲಕ್ಷ್ಮೀ ದೇಶಮಾನೆ ಪದ್ಮ ಪ್ರಶಸ್ತಿಗೆ ಭಾಜನರಾಗಿದ್ದಾರೆ.

******************

ತುಂಗಭದ್ರಾ ಜಲಾಶಯದ ೧೯ನೇ ಗೇಟ್ ಗೆ ಅಳವಡಿಸಿರುವ ಸ್ಟಾಪ್ ಲಾಗ್ ತೆಗೆದು ಕ್ರಸ್ಟ್ ಗೇಟ್ ನಿರ್ಮಾಣ ಮಾಡಲು ಗುಜರಾತ್ ನ ಹಾರ್ಡ್ವೇರ್ ಟೂಲ್ಸ್ ಅಂಡ್ ಮೆಶಿನರಿ ಕಂಪನಿ ಇಂದು ತುಂಗಭದ್ರ ಮಂಡಳಿಗೆ ಅದರ ವಿನ್ಯಾಸದ ಮಾದರಿಯನ್ನು ಸಲ್ಲಿಸಿದೆ.

ತುಂಗಭದ್ರಾ ಜಲಾಶಯದ ೧೯ನೇ ಕ್ರಸ್ಟ್ ಗೇಟ್ ಕಳೆದ ವರ್ಷ ಆಗಸ್ಟ್ ೧೦ರಂದು ಕಳಚಿದ್ದರಿಂದ ಅದಕ್ಕೆ ಸ್ಟಾಪ್ ಲಾಗ್ ಅಳವಡಿಸಲಾಗಿತ್ತು.

ಇಂದು ಸಲ್ಲಿಸಿರುವ ವಿನ್ಯಾಸಕ್ಕೆ ಮಂಡಳಿಯ ಪರಿಣಿತ ಮತ್ತು ಉನ್ನತ ಅಧಿಕಾರಿಗಳು ಸಮ್ಮತಿ ನೀಡಿದ ಬಳಿಕ ಕ್ರಸ್ಟ್ ಗೇಟ್ ನಿರ್ಮಾಣ ಕಾರ್ಯ ಆರಂಭವಾಗಲಿದೆ.

ಉಳಿದ ೩೨ ಕ್ರಸ್ಟ್ ಗೇಟ್ ಬದಲಿಸಲು ಈ ಟೆಂಡರ್ ಕರೆಯಲಾಗಿದೆ ಎಂದು ತುಂಗಭದ್ರಾ ಮಂಡಳಿಯ ಅಧಿಕಾರಿಗಳು ತಿಳಿಸಿದ್ದಾರೆ.

******************

ಉಡುಪಿ ಜಿಲ್ಲೆಯಲ್ಲಿರುವ ಕೈಗಾರಿಕೆಗಳಲ್ಲಿ ಸ್ಥಳೀಯ ಸಾರ್ವಜನಿಕರಿಗೆ ಅರ್ಹತಾ ಆಧಾರದ ಮೇಲೆ ಉದ್ಯೋಗಗಳನ್ನು ಕಲ್ಪಿಸಬೇಕು ಎಂದು ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದ ಕೋಟಾ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ.

ಉಡುಪಿಯಲ್ಲಿಂದು ಕೈಗಾರಿಕೋದ್ಯಮಿಗಳೊಂದಿಗೆ ನಡೆದ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಡಾ. ಸರೋಜಿನಿ ಮಹಿಷಿ ವರದಿಯಂತೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೈಗಾರಿಕೆಗಳಲ್ಲಿ ಎ.ಬಿ ಮತ್ತು ಸಿ ವರ್ಗದ ಹುದ್ದೆಗಳಿಗೆ ಅರ್ಹತೆಯನ್ನು ಆಧರಿಸಿ, ಜಿಲ್ಲೆಯ ಸ್ಥಳೀಯ ಜನರಿಗೆ ಪ್ರಥಮ ಆದ್ಯತೆಯ ಮೇಲೆ ಶೇಕಡ ೬೫ ಕ್ಕಿಂತ ಹೆಚ್ಚು ಹುದ್ದೆಗಳನ್ನು ನೀಡಬೇಕು ಎಂದು ಹೇಳಿದ್ದಾರೆ.

*****************

ರಾಜ್ಯದಾದ್ಯಂತ ಕೆಲವು ಕಡೆಗಳಲ್ಲಿ ಮಳೆಯಾಗಿದೆ.

ಗುರುಮಿಟ್ಕಲ್ ೯ ಲೋಕಾಪುರ ಮತ್ತು ಶಿರಹಟ್ಟಿ ತಲಾ ೮, ಸುಳ್ಯ ೭, ಮುಂಡಗೋಡು ೫, ಚಿಟಗುಪ್ಪದಲ್ಲಿ ೪ ಸೆಂಟಮೀಟರ್ ಮಳೆಯಾಗಿದೆ.

ದಕ್ಷಿಣ ಕನ್ನಡ, ಉಡುಪಿ, ಉತ್ತಕನ್ನಡ ಜಿಲ್ಲೆಗಳ ಕೆಲವೆಡೆ ಇಂದು ಗುಡುಗು ಸಹಿತ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರಿನಲ್ಲಿ ಭಾಗಶಃ ಮೋಡಕವಿದ ವಾತಾವರಣ ಸಂಭವ.

*********ಮುಕ್ತಾಯ********